## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1435
2. ಸದಸ್ಯರ ಹೆಸರು : ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 20.03.2025
4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ನೌಕರರು ಮತ್ತು ಅಧಿಕಾರಿಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್ ಲೈನ್ ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡುವ ಕುರಿತು ಸಿ.ಆ.ಸು.ಇಲಾಖೆಯು ಆದೇಶ/ಸುತ್ತೋಲೆಗಳನ್ನು ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಹಾಗಿದ್ದಲ್ಲಿ ಯಾವ ದಿನಾಂಕದಿಂದ ಆನ್-ಲೈನ್ ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡುವ ಕುರಿತು ಸೂಚಿಸಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯ ಸಿವಿಲ್ ಸೇವೆಯ ಗ್ರೂಪ್-ಎ ವೃಂದದ ಅಧಿಕಾರಿಗಳಿಗೆ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್-ಲೈನ್'ನಲ್ಲಿ ದಾಖಲಿಸುವ ಬಗ್ಗೆ ಅಧಿಸೂಚನೆ ಸಂಖ್ಯೆ: ಸಿಆಸುಇ 113 ಸೇವನೆ 2018, ದಿನಾಂಕ: 08.03.2019 ರಲ್ಲಿ ಕರ್ನಾಟಕ ನಾಗರಿಕ ಸೇವಾ (ಕಾರ್ಯನಿರ್ವಹಣಾ ವರದಿಗಳು) ನಿಯಮಗಳು, 2000ಕ್ಕೆ ತಿದ್ದುಪಡಿ ಮಾಡಲಾಗಿದೆ. ಮುಂದುವರೆದು, ಈ ಬಗ್ಗೆ, ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 09 ಕತವ 2018, ದಿನಾಂಕ: 05.04.2019 ರಲ್ಲಿ ಕೆಲವು ಸೂಚನೆಗಳನ್ನು ನೀಡಲಾಗಿದೆ.<br>ಮುಂದುವರೆದು, ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್-ಲೈನ್'ನಲ್ಲಿ ದಾಖಲಿಸುವುದನ್ನು ಗ್ರೂಪ್-ಬಿ ಮತ್ತು ಸಿ ವೃಂದದ ಅಧಿಕಾರಿಗಳಿಗೂ ವಿಸ್ತರಿಸುವುದಕ್ಕೆ ಸಂಬಂಧಿಸಿದಂತೆ ಅಧಿಸೂಚನೆ ಸಂಖ್ಯೆ: ಸಿಆಸುಇ 26 ಸೇವನೆ 2020, ದಿನಾಂಕ: 15.07.2020 ರಲ್ಲಿ ಕರ್ನಾಟಕ ನಾಗರಿಕ ಸೇವಾ (ಕಾರ್ಯನಿರ್ವಹಣಾ ವರದಿಗಳು) ನಿಯಮಗಳು, 2000ಕ್ಕೆ ತಿದ್ದುಪಡಿ ಮಾಡಲಾಗಿದೆ.<br>ಮೇಲಿನಂತೆ, ಎಲ್ಲಾ ವೃಂದದ ಅಧಿಕಾರಿ/ನೌಕರರು ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್-ಲೈನ್'ನಲ್ಲಿ ದಾಖಲಿಸಲು ಕರ್ನಾಟಕ ನಾಗರಿಕ ಸೇವಾ (ಕಾರ್ಯನಿರ್ವಹಣಾ ವರದಿಗಳು) ನಿಯಮಗಳು, 2000ಕ್ಕೆ ತಿದ್ದುಪಡಿ ಮಾಡಿ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಎಲ್ಲಾ ಇಲಾಖೆಗಳು ಆನ್-ಲೈನ್'ನಲ್ಲಿ ಕಾರ್ಯನಿರ್ವಹಣಾ ವರದಿಯನ್ನು ಕಡ್ಡಾಯವಾಗಿ ದಾಖಲಿಸಬೇಕಿರುತ್ತದೆ. |
| ಆ) | ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡದೇ ತೊಂದರೆಯಾಗುತ್ತಿರುವ ಬಗ್ಗೆ ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ; ಹಾಗಿದ್ದಲ್ಲಿ ಯಾವ ಯಾವ ಇಲಾಖೆಗಳಲ್ಲಿ ನಿರ್ವಹಣೆ ಮಾಡಲಾಗುತ್ತಿದೆ ಮತ್ತು ಯಾವ ಯಾವ ಇಲಾಖೆಗಳಲ್ಲಿ ನಿರ್ವಹಣೆ ಮಾಡಲಾಗುತ್ತಿಲ್ಲ; ಮತ್ತು ದಾಖಲೆ ಹಾಗೂ ನಿರ್ವಹಣೆ ಮಾಡದೇ ಇದ್ದಲ್ಲಿ ಕಾರಣಗಳೇನು; (ಇಲಾಖಾವಾರು ಸಂಪೂರ್ಣ ಮಾಹಿತಿ ನೀಡುವುದು) | |
| ಇ) | ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು e-PRS (e-Performance Reporting System) ತಂತ್ರಾಂಶದ ಮೂಲಕ ದಾಖಲಿಸುವಂತೆ ಹಾಗೂ ಈ | ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 09 ಕತವ 2018, ದಿನಾಂಕ: 05.04.2019 ರಲ್ಲಿ ಗ್ರೂಪ್-ಎ ವೃಂದದ ಅಧಿಕಾರಿಗಳಿಗೆ ವಾರ್ಷಿಕ ಕಾರ್ಯನಿರ್ವಹಣಾ |

| | | |
|---|---|---|
| | ಉದ್ದೇಶಕ್ಕಾಗಿ Custodian, Alternate Custodian, PAR Managerಗಳನ್ನು ವಿವಿಧ ಇಲಾಖೆಗಳಲ್ಲಿ ಗುರುತಿಸಲಾಗಿದೆಯೇ; ಗುರುತಿಸಿದ್ದಲ್ಲಿ ಅವರುಗಳ ಸಂಪೂರ್ಣ ಮಾಹಿತಿ ನೀಡುವುದು; ಗುರುತಿಸದೇ ಇದ್ದಲ್ಲಿ ಕಾರಣಗಳೇನು; ಯಾವಾಗ ಗುರುತಿಸಲಾಗುವುದು; | ವರದಿಯನ್ನು ಆನ್-ಲೈನ್‌ನಲ್ಲಿ ದಾಖಲಿಸುವ ವ್ಯವಸ್ಥೆಯನ್ನು ಪರಿಣಾಮಕಾರಿಯಾಗಿ ಕಾರ್ಯಗತಗೊಳಿಸಲು Custodian (ಅಭಿರಕ್ಷಕರು), Alternate Custodian (ಪರ್ಯಾಯ ಅಭಿರಕ್ಷಕರು), PAR Manager ಎಂಬ ನಿಯಂತ್ರಣಾ ವ್ಯವಸ್ಥೆಯನ್ನು ಸೃಜಿಸಿ, ಸದರಿ ಅಧಿಕಾರಿಗಳು ಸಚಿವಾಲಯದ ಆಡಳಿತ ಇಲಾಖೆಗಳ ಯಾವ ಹಂತದ ಅಧಿಕಾರಿಗಳಾಗಿರಬೇಕು ಎಂಬ ಬಗ್ಗೆ ನಿಯಮಿಸಲಾಗಿರುತ್ತದೆ |
| ಈ) | ಅಧಿಕಾರಿ/ಸಿಬ್ಬಂದಿಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್-ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡುವ ಕುರಿತು ಸರ್ಕಾರ ಕ್ರಮ ಕೈಗೊಳ್ಳುವುದೇ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರದ ನಿಲುವೇನು; | ಕರ್ನಾಟಕ ನಾಗರಿಕ ಸೇವಾ (ಕಾರ್ಯನಿರ್ವಹಣಾ ವರದಿಗಳು) ನಿಯಮಗಳು, 2000ರನ್ವಯ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ರಾಜ್ಯ ಸಿವಿಲ್ ಸೇವೆಯ ಗ್ರೂಪ್-ಎ, ಬಿ, ಸಿ ವೃಂದದ ಪ್ರತಿಯೊಬ್ಬ ನೌಕರನು ಆನ್‌ಲೈನ್‌ನಲ್ಲಿ ಸಲ್ಲಿಸಲು ಅವಕಾಶವಿರುತ್ತದೆ. |
| ಉ) | ಸಿ.ಆ.ಸು.ಇ.ಯಿಂದ ಬಡ್ತಿ, ಜೇಷ್ಠತಾ ಪಟ್ಟಿ ಪ್ರಕಟಣೆ, ವಾರ್ಷಿಕ ಕಾರ್ಯನಿರ್ವಹಣಾ ವರದಿ, ಇನ್ನು ಮುಂತಾದ ವಿಷಯಗಳಿಗೆ ಸಂಬಂಧಿಸಿದಂತೆ ಆದೇಶ/ಸುತ್ತೋಲೆಗಳನ್ನು ವಿವಿಧ ಇಲಾಖೆಗಳು ಸಮಯೋಚಿತವಾಗಿ ಅನುಷ್ಠಾನಗೊಳಿಸುವಲ್ಲಿ ವಿಳಂಬ ಮತ್ತು ವಿಫಲವಾಗುತ್ತಿರಲು ಕಾರಣಗಳೇನು; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | ಸಿ.ಆ.ಸು.ಇ. ಸೇವಾ ನಿಯಮಗಳು ವಿಭಾಗವು ರಾಜ್ಯ ಸಿವಿಲ್ ಸೇವೆಗಳಿಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ನಿಯಮಗಳನ್ನು ರೂಪಿಸಿ, ಅವುಗಳನ್ನು ಸಮರ್ಪಕವಾಗಿ ಅನುಷ್ಠಾನ ಮತ್ತು ಪಾಲನೆಯಲ್ಲಿ ಎಲ್ಲಾ ಇಲಾಖೆಗಳ ಮೇಲುಸ್ತುವಾರಿ ಮಾಡುತ್ತದೆ. ನಿಯಮಗಳನ್ನು ಪಾಲಿಸುವಲ್ಲಿ ಉಂಟಾಗುವ ತೊಡಕುಗಳಿಗೆ ಸಂಬಂಧಿಸಿದಂತೆ ಅಗತ್ಯ ಮಾರ್ಗದರ್ಶನವನ್ನು ಸಹಾ ಮಾಡಲಾಗುತ್ತದೆ. ಸದರಿ, ನಿಯಮಗಳನ್ನು ಇಲಾಖೆಗಳಲ್ಲಿ ಸಮರ್ಪಕವಾಗಿ ಪಾಲಿಸಲು ಅಥವಾ ಅನುಷ್ಠಾನಗೊಳಿಸಲು ದುರುದ್ದೇಶಪೂರ್ವಕವಾಗಿ ವಿಳಂಬ ಧೋರಣೆ ಅನುಸರಿಸಿದಲ್ಲಿ ನಿಯಮಾನುಸಾರ ಶಿಸ್ತುಕ್ರಮ ಕೈಗೊಳ್ಳಲು ಅವಕಾಶವಿರುತ್ತದೆ |

ಸಂಖ್ಯೆ: ಸಿಆಸುಇ 25 ಸೇವನೇ 2025

(ಸಿದ್ದರಾಮಯ್ಯ)

**ಮುಖ್ಯಮಂತ್ರಿ**